ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1434 (1660)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಬಗ್ಗೆ

(ಅ) ಹಾಸನ ಜಿಲ್ಲೆಗೆ ಕಳೆದ 3 ವರ್ಷಗಳಲ್ಲಿ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗಾಗಿ ಮಂಜೂರಾದ ಅನುದಾನವೆಷ್ಟು; ಇದರಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಯಾಗದೇ ಬಾಕಿ ಉಳಿದಿರುವ ಅನುದಾನವೆಷ್ಟು; ಬಾಕಿ ಉಳಿಯಲು ಕಾರಣಗಳೇನು; ಯಾವಾಗ ಬಿಡುಗಡೆ ಮಾಡಲಾಗುವುದು; (ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಅಭಿವೃದ್ಧಿ ಮಾಡಿದ ರಸ್ತೆಗಳು ಯಾವುವು; ಈ ರಸ್ತೆ ಕಾಮಗಾರಿಗಳ ಮೊತ್ತವೆಷ್ಟು; ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು; (ಕಾಮಗಾರಿ ಹೆಸರು, ಗ್ರಾಮ ಮತ್ತು ತಾಲ್ಲೂಕಿನ ವಿವರ ನೀಡುವುದು)

(ಇ) ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಸರ್ಕಾರವು ಯಾವ ಯಾವ ಹೊಸ ಯೋಜನೆಗಳನ್ನು ಪ್ರಸಕ್ತ ಸಾಲಿನಲ್ಲಿ ರೂಪಿಸಿದೆ; ಸದರಿ ಯೋಜನೆಗಳಿಗೆ ಅನುದಾನ ನಿಗದಿಪಡಿಸಲಾಗಿದೆಯೇ? (ವಿವರ ನೀಡುವುದು)